ಕರ್ನಾಟಕ ಸರ್ಕಾರ
ಪೊಲೀಸ್ ಇಲಾಖೆ

ಸಂಖ್ಯೆ:92/ನೇಮಕಾತಿ-2/2020-21

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ರವರ ಕಛೇರಿ
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು, ದಿನಾಂಕ:28.04.2021.

ವಿಷಯ: ರಿಸರ್ವ್ ಸಬ್-ಇನ್ಸ್‌ಪೆಕ್ಟರ್ (ಸಿಎಆರ್/ಡಿಎಆರ್) (ಪುರುಷ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿ ಕುರಿತು.

ಉಲ್ಲೇಖ: 1) ಅಧಿಸೂಚನೆ ಸಂಖ್ಯೆ:92/ನೇಮಕಾತಿ-2/2020-21, ದಿನಾಂಕ:07.05.2020.
2) ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ಸಂಖ್ಯೆ:92/ನೇಮಕಾತಿ-2/2020-21, ದಿನಾಂಕ:01.03.2021.
3) ದ್ವಿತೀಯ ತಾತ್ಕಾಲಿಕ ಆಯ್ಕೆ ಪಟ್ಟಿ ದಿನಾಂಕ:18.03.2021.
4) ಪೊಲೀಸ್ ಆಯುಕ್ತರು, ಮೈಸೂರು ನಗರ ರವರ ಪತ್ರ ಸಂಖ್ಯೆ:ಸಿಬ್ಬಂದಿ(3)/16/2020-21, ದಿನಾಂಕ: 21.04.2021.

## ಪೊಲೀಸ್ ಆಯುಕ್ತರು, ಮೈಸೂರು ನಗರ ಘಟಕಕ್ಕೆ ಸಂಬಂಧಿಸಿದ ರಿಸರ್ವ್ ಸಬ್-ಇನ್ಸ್‌ಪೆಕ್ಟರ್ (ಸಿಎಆರ್/ಡಿಎಆರ್) ಹುದ್ದೆಗಳ ಅಂತಿಮ ಆಯ್ಕೆಪಟ್ಟಿ

1. ರಿಸರ್ವ್ ಸಬ್-ಇನ್ಸ್‌ಪೆಕ್ಟರ್ (ಸಿಎಆರ್/ಡಿಎಆರ್) (ಪುರುಷ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿಯನ್ನು ಉಲ್ಲೇಖಿತ-1ರ ಅಧಿಸೂಚನೆಯನ್ವಯ ಕೈಗೊಳ್ಳಲಾಗಿರುತ್ತದೆ. ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡ ನಂತರ ವೃಂದ ಮತ್ತು ನೇಮಕಾತಿ (ತಿದ್ದುಪಡಿ) ನಿಯಮಗಳು, 2009 ರಲ್ಲಿನ ನಿಯಮಗಳಂತೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಉಲ್ಲೇಖಿತ-2 ರನ್ವಯ ಪ್ರಕಟಿಸಿದ ನಂತರ ಸದರಿ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನಿಯಮಗಳನುಸಾರ ರಚಿಸಲಾಗಿರುವ ವೈದ್ಯಕೀಯ ಮಂಡಳಿಯಿಂದ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗಿರುತ್ತದೆ. ವೈದ್ಯಕೀಯ ಪರೀಕ್ಷೆ ಪೂರ್ಣಗೊಂಡ ನಂತರ **ಪೊಲೀಸ್ ಆಯುಕ್ತರು, ಮೈಸೂರು** ನಗರ ರವರು ವೈದ್ಯಕೀಯ ಪರೀಕ್ಷೆಯ ವರದಿಯನ್ನು ಕಳುಹಿಸಿದ್ದು, ಸದರಿ ವರದಿಯನುಸಾರ ದ್ವಿತೀಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಉಲ್ಲೇಖಿತ-3 ರನ್ವಯ ಪ್ರಕಟಿಸಲಾಗಿರುತ್ತದೆ.

2. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಗುಣ ಮತ್ತು ನಡತೆ ಹಾಗೂ ದಾಖಲೆಗಳ ಪರಿಶೀಲನಾ ಕಾರ್ಯವನ್ನು ಕೈಗೊಳ್ಳುವಂತೆ **ಪೊಲೀಸ್ ಆಯುಕ್ತರು, ಮೈಸೂರು** ನಗರ ರವರಿಗೆ ನಿರ್ದೇಶಿಸಿದ ಹಿನ್ನೆಲೆಯಲ್ಲಿ ಸದರಿಯವರು ಅಭ್ಯರ್ಥಿಗಳ ದಾಖಲೆಗಳ ಪರಿಶೀಲನಾ ಕಾರ್ಯವನ್ನು ಪೂರ್ಣಗೊಳಿಸಿ, ಉಲ್ಲೇಖಿತ-4 ರನ್ವಯ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯನುಸಾರ 03 ಅಭ್ಯರ್ಥಿಗಳ ಗುಣ ಮತ್ತು ನಡತೆ ಹಾಗೂ ದಾಖಲೆಗಳ ಪರಿಶೀಲನಾ ಕಾರ್ಯ ಪೂರ್ಣಗೊಳಿಸಲಾಗಿರುತ್ತದೆ. ವೃಂದ ಮತ್ತು ನೇಮಕಾತಿ ನಿಯಮಾನುಸಾರ ಅಭ್ಯರ್ಥಿಗಳ ದಾಖಲೆಗಳ ಪರಿಶೀಲನಾ ವರದಿಯನ್ನು ಆಧರಿಸಿ ರಿಸರ್ವ್ ಸಬ್-ಇನ್ಸ್‌ಪೆಕ್ಟರ್ (ಸಿಎಆರ್/ಡಿಎಆರ್) (ಪುರುಷ) ಹುದ್ದೆಗೆ ಮೆರಿಟ್ ಹಾಗೂ ಮೀಸಲಾತಿಯನುಸಾರ 03 ಅರ್ಹ ಅಭ್ಯರ್ಥಿಗಳ **ಪೊಲೀಸ್ ಆಯುಕ್ತರು, ಮೈಸೂರು ನಗರ** ಘಟಕದ ಅಂತಿಮ ಆಯ್ಕೆಪಟ್ಟಿಯನ್ನು ತಯಾರಿಸಿ, ಕೆಳಕಂಡಂತೆ ಪ್ರಕಟಿಸಲಾಗಿರುತ್ತದೆ.

ಈ ಆಯ್ಕೆಪಟ್ಟಿಯು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ / ಮಾನ್ಯ ಉಚ್ಚ ನ್ಯಾಯಾಲಯ / ಮಾನ್ಯ ಭಾರತದ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಮಾನಗಳಿಗೆ ಒಳಪಟ್ಟಿರುತ್ತದೆ.

**FINAL SELECT LIST FOR THE POST OF ARMED RESERVE SUB-INSPECTOR (CAR / DAR) (MEN)(MERITWISE)**

| SL. NO | APPN. NO | ROLL NO | NAME | MARKS SECURED | | TOTAL | SELECTED CATEGORY |
|---|---|---|---|---|---|---|---|
| | | | | P1 | P2 | | |
| 1 | 2527493 | 3508185 | PRADEEP NAIK | 34.5 | 120 | 154.5 | GM_RUR |
| 2 | 2530073 | 3505923 | PRADEEPA R N | 38.5 | 111 | 149.5 | 2A_OTH |
| 3 | 2531683 | 3506650 | JAYASINGH | 37.5 | 106.875 | 144.375 | SC_OTH |

ಟಿಪ್ಪಣಿ : ಈ ಅಂತಿಮ ಆಯ್ಕೆ ಪಟ್ಟಿಯಲ್ಲಿನ ಆಯ್ಕೆಯ ಪ್ರವರ್ಗ ಮತ್ತು ಘಟಕದ ಹಂಚಿಕೆಯು, ನೇಮಕಾತಿ ಪ್ರಕ್ರಿಯೆಯ ವಿವಿಧ ಹಂತಗಳಲ್ಲಿ ಕೆಲವು ಅಭ್ಯರ್ಥಿಗಳ ಅನರ್ಹತೆಯ ಕಾರಣಗಳಿಂದ ಕ್ರೂಢೀಕೃತ ಆಯ್ಕೆ ಪಟ್ಟಿಯು ಪರಿಷ್ಕರಣೆಯಾದಲ್ಲಿ ಸದರಿ ಆಯ್ಕೆ ಪಟ್ಟಿಯಲ್ಲಿ ಬದಲಾವಣೆಯಾಗುವ ಪ್ರವರ್ಗಗಳನುಸಾರ ಘಟಕಗಳ ಬದಲಾವಣೆಯ ಷರತ್ತುಗಳಿಗೆ ಒಳಪಟ್ಟಿರುತ್ತದೆ.

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಮತ್ತು ಅಧ್ಯಕ್ಷರು,
ಆರ್‌ಎಸ್‌ಐ (ಸಿಎಆರ್ / ಡಿಎಆರ್) ನೇಮಕಾತಿ ಸಮಿತಿ,
ಕಾರ್ಲ್‌ಟನ್ ಭವನ, ಅರಮನೆ ರಸ್ತೆ,
ಬೆಂಗಳೂರು.

ಪ್ರತಿಯನ್ನು:
1] ಪೊಲೀಸ್ ಆಯುಕ್ತರು, ಮೈಸೂರು ನಗರ.
2] ಕಛೇರಿ ಕಡತ ಮತ್ತು ಸೂಚನಾ ಫಲಕ.

ಪ್ರತಿಯನ್ನು ಅಭಿನಂದನೆಗಳೊಂದಿಗೆ:-
ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕರ್ನಾಟಕ ರಾಜ್ಯ, ಬೆಂಗಳೂರು.